64. Intellectual property services
65. Forward Contract Services
66. Pandal of Shamiana Services
67. Outdoor Catering Services
68. TV or Radio Programme Production Services
69. Construction Services in respect of Commercial or Industrial Buildings and Civil Structures.
70. Travel Agents (other than Air Rail Travel Agents)
71. Transport of Goods by Road (by a Goods Transport Agency which issues Consignment. Note, by whatever name called)

595(708) ಶ್ರೀ ರಾಜೇಂದ್ರನ್ ಎಸ್. (ಕೆ.ಜಿ.ಎಫ್) ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯಲ್ಲಿ ಅದರಲ್ಲೂ ಮುಖ್ಯವಾಗಿ ಕೆ.ಜಿ.ಎಫ್. ನಲ್ಲಿ ತೋಟಗಾರಿಕೆ ವೃತ್ತಿಯನ್ನು ಅಭಿವೃದ್ಧಿಪಡಿಸುವುದರ ಮೂಲಕ ನಿರುದ್ಯೋಗ ಸಮಸ್ಯೆಯನ್ನು ಹೋಗಲಾಡಿಸಲು ಸರ್ಕಾರ ಕೈಗೊಂಡಿರುವ ಅಥವಾ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಆರ್. ಶ್ರೀನಿವಾಸ (ತೋಟಗಾರಿಕೆ ಸಚಿವರು)

ಅ) ಗ್ರಾಮೀಣ ಪ್ರದೇಶದ ಯುವಕರಿಗೆ / ರೈತಮಕ್ಕಳಿಗೆ ವಿವಿಧ ರೀತಿಯ ತೋಟಗಾರಿಕೆ ತರಬೇತಿ ಕಾರ್ಯಕ್ರಮಗಳನ್ನು ಪ್ರತಿ ವರ್ಷ ಆಯೋಜಿಸಲಾಗುತ್ತಿದೆ. ಇದು ಗ್ರಾಮೀಣ ಪ್ರದೇಶದಲ್ಲಿ ನಿರುದ್ಯೋಗ ಸಮಸ್ಯೆಯನ್ನು ನಿವಾರಿಸುವಲ್ಲಿ ಪರೋಕ್ಷವಾಗಿ ಸಹಕಾರಿಯಾಗಿರುತ್ತದೆ.

ವಿವರ ಇಂತಿದೆ:

1. ಕೋಲಾರ ಜಿಲ್ಲೆಯ ರೈತಮಕ್ಕಳಿಗೆ 10 ತಿಂಗಳ ಅವಧಿಯ ತೋಟಗಾರಿಕೆ ತರಬೇತಿ ಕಾರ್ಯಕ್ರಮವನ್ನು ಬೆಂಗಳೂರಿನ ಲಾಲ್‌ಬಾಗ್‌ನಲ್ಲಿರುವ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ಆಯೋಜಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಹೊಸದಾಗಿ ಸ್ಥ ನಿಯೋಜನಾ ತರಬೇತಿ ಕಾರ್ಯಕ್ರಮವನ್ನು ಸಹ ಅಳವಡಿಸಲಾಗಿದೆ. ಇದರಲ್ಲಿ ತರಬೇತಿ ಪಡೆದ ಅಭ್ಯರ್ಥಿಗಳನ್ನು ಹೆಸರಾಂತ ಸಂಸ್ಥೆಗಳು / ಕಂಪನಿಗಳು / ಪ್ರಗತಿಪರ ರೈತರ ತೋಟಗಳಿಗೆ ಪ್ರಾಯೋಗಿಕ ತರಬೇತಿಗಾಗಿ ನಿಯೋಜಿಸಲಾಗುವುದು, ಇದರಿಂದಾಗಿ, ತರಬೇತಿ ವಿದ್ಯಾರ್ಥಿಗಳ ಕೆಲಸದಲ್ಲಿ ವಿಶ್ವಾಸ ಹಾಗೂ ಸ್ವಯಂ ಪೂರ್ಣತೆ ಮೂಡಿಸಲು ಸಹಕಾರಿಯಾಗಿದೆ.

2. ಇದಲ್ಲದೆ, ಜಿಲ್ಲಾ ಮಟ್ಟದಲ್ಲಿ ಆಸಕ್ತ ರೈತರಿಗೆ / ರೈತ ಮಹಿಳೆಯರಿಗೆ ಅಲ್ಪಾವಧಿ ಕಾರ್ಯಕ್ರಮಗಳನ್ನು ಸಹ ಆಯೋಜಿಸಲಾಗುತ್ತಿದೆ. ಗ್ರಾಮ ತೋಟಗಾರಿಕೆ ಬಗ್ಗೆ, ತೋಟಗಾರಿಕೆ ಉತ್ಪನ್ನಗಳ ಸಂಸ್ಕರಣೆ / ಶೇಖರಣಾ ತಾಂತ್ರಿಕತೆ, ಅಣಬೆ

ಕೃಷಿ ಇತ್ಯಾದಿ ವಿಷಯಗಳ ಬಗ್ಗೆ ಅರಿವು ಮೂಡಿಸುವ ಮೂಲಕ ಸಹ, ತೋಟಗಾರಿಕೆಯಲ್ಲಿ ತೊಡಗಿಸಿಕೊಳ್ಳುವಂತೆ ಉತ್ತೇಜಿಸಲಾಗುತ್ತಿದೆ.

3. ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಉತ್ತೇಜಿಸುವ ದೃಷ್ಟಿಯಿಂದ, ಇಲಾಖೆಯು, ನಬಾರ್ಡ್ ಮೂಲಕ ಸಾಲ-ಸೌಲಭ್ಯಗಳನ್ನು ಕಲ್ಪಿಸುತ್ತಿದೆ. ಅಲ್ಲದೇ, ತೋಟಗಾರಿಕೆಯ ವಿವಿಧ ಚಟುವಟಿಕೆಗಳ ಖಾಸಗಿ ವಲಯದ ಯೋಜನೆಗಳಿಗೂ ಸಹ ನಬಾರ್ಡ್ ಮತ್ತು ರಾಷ್ಟ್ರೀಯ ತೋಟಗಾರಿಕೆ ಮಂಡಳಿವತಿಯಿಂದ ಸಾಲ-ಸೌಲಭ್ಯ ಒದಗಿಸಲಾಗುತ್ತಿದೆ.

ಮೇಲ್ಕಂಡ ಕಾರ್ಯಕ್ರಮಗಳಿಂದಾಗಿ, ಆಯಾ ಪ್ರದೇಶದ ಆಸಕ್ತ ರೈತರು, ರೈತ ಯುವಕರು ಹಾಗೂ ರೈತ ಮಹಿಳೆಯರು ತೋಟಗಾರಿಕೆ ವೃತ್ತಿಯಲ್ಲಿ ಸ್ವತ: ತೊಡಗಿಸಿಕೊಳ್ಳಬಹುದಾಗಿರುತ್ತದೆ, ಮತ್ತು ನರ್ಸರಿ, ಮತ್ತಿತರೆ ಖಾಸಗಿ ಕ್ಷೇತ್ರದ ತೋಟಗಾರಿಕೆ ಉದ್ಯಮಗಳಲ್ಲಿ ಸಹ ತೊಡಗಿಸಿಕೊಳ್ಳಬಹುದಾಗಿರುತ್ತದೆ.

596(709) ಶ್ರೀ ರಾಜೇಂದ್ರನ್ ಎಸ್. (ಕೆ.ಜಿ.ಎಫ್) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೆ.ಜಿ.ಎಫ್. ನಲ್ಲಿರುವ ರಾಬರ್ಟ್‌ಸನ್ ಪೇಟೆಯ ಗೃಹ ನಿರ್ಮಾಣ ಸಹಕಾರ ಸಂಘದ ಕಟ್ಟಡವನ್ನು ಖಾಸಗಿ ವ್ಯಕ್ತಿಯೊಬ್ಬರ ಹೆಸರಿಗೆ ಖಾತೆ ಆಗಿರುವುದು ಕಾನೂನು ಬಾಹಿರವಲ್ಲವೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಅಥವಾ ಕೈಗೊಳ್ಳುವ ಕ್ರಮವೇನು?

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಸಚಿವರು)

ಅ) ಕೆ.ಜಿ.ಎಫ್. ನಗರದಲ್ಲಿ ರಾಬರ್ಟ್‌ಸನ್ ಪೇಟೆ ಗೃಹ ನಿರ್ಮಾಣ ಸಹಕಾರ ಸಂಘವು ಸಮಾಪನೆಯಾಗಿದ್ದು, ಈ ಸಂಘದ ಹೆಸರಿನಲ್ಲಿ ಯಾವುದೇ ಕಟ್ಟಡ ಇರುವುದಿಲ್ಲ. ಆದುದರಿಂದ ಖಾಸಗಿ ವ್ಯಕ್ತಿಯೊಬ್ಬರ ಹೆಸರಿಗೆ ಕಟ್ಟಡದ ಖಾತೆ ಆಗುವ ಪ್ರಶ್ನೆಯುದ್ಭವಿಸುವುದಿಲ್ಲ.

ಆ) ಉದ್ಭವಿಸುವುದಿಲ್ಲ.

599(151) ಶ್ರೀ ರಾಮಸ್ವಾಮಿ ಎ.ಟಿ. (ಅರಕಲಗೂಡು) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಎಷ್ಟು ಸಹಕಾರಿ ಸಕ್ಕರೆ ಕಾರ್ಖಾನೆಗಳು ಲಾಭ ಮತ್ತು ನಷ್ಟದಲ್ಲಿರುತ್ತವೆ (ವಿವರ ಒದಗಿಸುವುದು);

ಆ) ನಷ್ಟ ಅನುಭವಿಸಲು ಕಾರಣಗಳೇನು;

ಇ) ಸರ್ಕಾರ ಸಕ್ಕರೆ ಕಾರ್ಖಾನೆಗಳನ್ನು ಸದೃಢಪಡಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಸಚಿವರು)

ಅ) ರಾಜ್ಯದಲ್ಲಿ ಒಟ್ಟು 28 ಸಹಕಾರಿ ಸಕ್ಕರೆ ಕಾರ್ಖಾನೆಗಳಿದ್ದು. ಈ ಪೈಕಿ 3